<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.</u>

**<u>ಸಿಸಿ ನಂ.1533/2022</u>**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಮಳಖೇಡ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ನಂ.1ಃ ಅಮೃತಪ್ಪ ತಂದೆ ಶಿವರಾಯ ಪುಜಾರಿ
ವಃ 60 ವರ್ಷ, ಉಃ ಒಕ್ಕಲುತನ

2 ವಿಶ್ವರಾಧ @ ವಿಶ್ವನಾಥ ತಂದೆ ಅಮೃತಪ್ಪ ಪುಜಾರಿ
ವಃ 21 ವರ್ಷ, ಉಃ ಒಕ್ಕಲುತನ
ಎಲ್ಲರೂ ಸಾಃ ಹಂಗನಳ್ಳಿ ಗ್ರಾಮ

----

<u>ದೋಷಾರೋಪಣೆ</u>

ನಾನು ಶ್ರೀ ಬಾಲು, ಬಿ.ಎ.,ಎಲ್‌ಎಲ್‌ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿಮ್ಮ ಮೇಲೆ ಹೊರಿಸುವ ಆರೋಪವೇನೆಂದರೆ,

ದಿನಾಂಕ 21-07-2022 ರಂದು ಮುಂಜಾನೆ 10.00 ಗಂಟೆ ಸುಮಾರಿಗೆ ಮಳಖೇಡ ಪೋಲಿಸ ಠಾಣಾ ವ್ಯಾಪ್ತಿಯಲ್ಲಿ ಬರುವ ಹಂಗನಳ್ಳಿ ಗ್ರಾಮದಲ್ಲಿ ಚಾಸಾ 1 ರೋಡಿನ ಮೇಲೆ ಜಾಕನಳ್ಳಿ ಇವರ ಮನೆಯ ಹತ್ತಿರ ನಡೆದುಕೊಂಡು ಹೊರಟಾಗ ಆರೋಪಿ 1, 2 ನೇದ್ದವರು ತನ್ನ ಹೊಲಕ್ಕೆ ಹೋಗಲು ದಾರಿ ಬಿಡುತ್ತಿಲ್ಲ ಅಂತಾ ವೈಷಮ್ಯ ಬೆಳೆಸಿ ಚಾಸಾ .1 ನೆದ್ದವರಿಗೆ ಮುಂದೆ ಹೋಗದಂತೆ ತಡೆದು ನಿಲ್ಲಿಸಿದ್ದು, ಆ ಮೂಲಕ ಆರೋಪಿತರಾದ ನೀವು ಭಾ.ದಂ.ಸಂ.ಕಲಂ 341 ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಎರಡನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರೆಲ್ಲರೂ ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವುದರ ಸಲುವಾಗಿ ಆರೋಪಿ 2 ನೇದ್ದವನು ಹೊಟ್ಟೆಯಲ್ಲಿ ಕೈಯಿಂದ ಹೊಡೆದು ಗುಪ್ತ ಪೆಟ್ಟುಪಡಿಸಿದ್ದು , ಆ ಮೂಲಕ ಭಾ.ದಂ.ಸಂ.ಕಲಂ 323 ಸಂಗಡ 34 ರಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಮೂರನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಆರೋಪಿ 2 ನೇದ್ದವನು ಚಾಸಾ.1 ರವರಿಗೆ ತೆಕ್ಕೆಯಲ್ಲಿ ಹಿಡಿದುಕೊಂಡಿದ್ದು ಆರೋಪಿ 1 ನೇದ್ದವನು ಬಡಿಗೆಯಿಂದ ಬೆನ್ನಿಗೆ ಹೊಡೆದು ಗುಪ್ತ ಪೆಟ್ಟು ಪಡಿಸಿದ್ದು ಆ ಮೂಲಕ ಭಾ.ದಂ.ಸಂ. ಕಲಂ 324 ರ ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ನಾಲ್ಕನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಆರೋಪಿ 1 ಮತ್ತು 2 ನೇದ್ದವರು ಚಾಸಾ.1 ನೇದ್ದವರಿಗೆ ತಡೆದು, ಮಲ್ಯಾ ನೀನು ನಮ್ಮ ಹೊಲಕ್ಕೆ ಹೋಗಲು ದಾರಿ ಬಿಡುವುದಿಲ್ಲ ಮಗನೇ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತತೆಗೆ ಭಂಗ ಉಂಟು ಮಾಡಿರುತ್ತಾರೆ ಆ ಮೂಲಕ ಭಾ.ದಂ.ಸಂ. ಕಲಂ 504 ರ ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕೊನೆಯದಾಗಿ ಮೇಲೆ ಹೇಳಲಾದ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿತರು ತಮ್ಮ ಏಕೋದ್ದೇಶವನ್ನು ಈಡೇರಿಸಿಕೊಳ್ಳುವ ಸಲುವಾಗಿ ಬಂದು ಚಾಸಾ.1 ರವರೊಡನೆ ಜಗಳ ಮಾಢಿ ಜಗಳ ಬಿಟ್ಟು ಹೋಗುವಾಗ ನೀವು ಇನ್ನೊಂದು ಸಲ ನಮ್ಮ ತಂಟೆಗೆ ಬಂದಲ್ಲಿ ಜೀವ ಸಹಿತ ಬಿಡುವುದಿಲ್ಲ ಅಂತಾ ಜೀವದ ಬೆದರಿಕೆ ಹಾಕಿ ಹೋಗಿದ್ದು , ಆ ಮೂಲಕ ಭಾ.ದಂ.ಸಂ. ಕಲಂ 506 ರ ಸಂಗಡ 34 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತೀರಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 06-03-2025 ಪ್ರ.ದ.ನ್ಯಾದಂ. ಸೇಡಂ.

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.1533/2022**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಸೇಡಂ ಪೊಲೀಸ್ ಠಾಣೆ

-ಃಃ ವಿರುದ್ಧ ಃಃ-

ಆರೋಪಿ ನಂ.1ಃ ಅಮೃತಪ್ಪ ತಂದೆ ಶಿವರಾಯ ಪುಜಾರಿ
ವಃ 60 ವರ್ಷ, ಉಃ ಒಕ್ಕಲುತನ
ಸಾಃ ಹಂಗನಳ್ಳಿ ಗ್ರಾಮ ಹಾಗೂ ಇನ್ನೊಬ್ಬರು .

**ಆರೋಪಿತರ ಹೇಳಿಕೆ**

ಪ್ರಃ-1) ಈ ಓದಿ ಹೇಳಲಾದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿರುವಿರಾ?

ಉಃ ಆ.1

ಆ-2

ಪ್ರಃ-2) ನಿನ್ನ ತಪ್ಪನ್ನು ಒಪ್ಪಿಕೊಳ್ಳುತ್ತಿಯೋ ಅಥವಾ ವಿಚಾರಣೆ ನಡೆಯಬೇಕಾ?

ಉಃ ಆ.1

ಆ-2

(ದೋಷಾರೋಪಣೆಯನ್ನು ಆರೋಪಿತರಿಗೆ ಓದಿ ಹೇಳಿದ್ದು, ಅವರು ನೀಡಿದ ಹೇಳಿಕೆಯನ್ನು ಯಥಾವತ್ತಾಗಿ ದಾಖಲಿಸಿದ್ದು, ಅದು ಸಂಪೂರ್ಣ ಸತ್ಯವಾಗಿರುತ್ತದೆಂದು ಪ್ರಮಾಣೀಕರಿಸುತ್ತೇನೆ)

ಸಹಿ/-

ದಿನಾಂಕ 06-03-2025 ಪ್ರ.ದ.ನ್ಯಾದಂ. ಸೇಡಂ.